ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಆರೋಗ್ಯ-19

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 31/5/20

ಸಚಿವಾಲಯದ ಇಬ್ಬರಿಗೆ ಸೋಂಕು ದೃಢ

ಉವಾ 31/5/20

ನವದೆಹಲಿ: ವಿದೇಶಾಂಗ ಸಚಿವಾಲಯದ ಮುಖ್ಯ ಕಚೇರಿಯ ಇಬ್ಬರು ಸಿಬ್ಬಂದಿಗೆ ಕೊರೊನಾ ವೈರಸ್ ಸೋಂಕು ತಗುಲಿದೆ. ಅವರ ಜೊತೆ ಸಂಪರ್ಕದಲ್ಲಿದ್ದ ಎಲ್ಲಾ ಸಿಬ್ಬಂದಿಗೂ 14 ದಿನಗಳ ಕಾಲ ಪ್ರತ್ಯೇಕ ನಿಗಾದಲ್ಲಿ ಇರಲು ಸೂಚಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಸಚಿವಾಲಯದಲ್ಲಿ ಕಾನೂನು ವಿಭಾಗದಲ್ಲಿ ಕೆಲಸ ಮಾಡುತ್ತಿದ್ದ ಅಧಿಕಾರಿ ಮತ್ತು ಒಬ್ಬ ಮಧ್ಯ ಯೂರೋಪ್ ವಿಭಾಗದ ಸಲಹೆಗಾರರು ಸೋಂಕಿಗೆ ಒಳಗಾಗಿದ್ದಾರೆ. ಕಚೇರಿಯನ್ನು ನೈರ್ಮಲ್ಯೀಕರಣ ನಡೆಸಲಾಗಿದೆ ಎಂದು ಅವರು ಹೇಳಿದ್ದಾರೆ. ವಂದೇ ಭಾರತ್ ಅಭಿಯಾನ ಚಾಲ್ತಿಯಲ್ಲಿರುವುದರಿಂದ ಅಧಿಕಾರಿಗಳು ಕರ್ತವ್ಯಕ್ಕೆ ಹಾಜರಾಗಲೇಬೇಕಿದೆ ಎಂದು ಅವರು ಹೇಳಿದ್ದಾರೆ.